# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 18, ರಾಧಾಕೃಷ್ಣ ದೇವಸ್ಥಾನ.**

**ಸಂಖ್ಯೆ: ಸ.ಅ/ವಾ-18/ಪಿ.ಆರ್/07/2020-21** **ದಿನಾಂಕ:24-12-2020**

**ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ: ಬಿ12(5)ಪಿ.ಆರ್/35/2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 19-12-2020 ರಂದು ವಾರ್ಡ್ ನಂ:18, ರಾಧಾಕೃಷ್ಣ ದೇವಸ್ಥಾನ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**:: ಸಭೆಗೆ ಹಾಜರಾಗಿದ್ದವರ ವಿವರಗಳು ::**

| ಕ್ರಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ.ಎಸ್.ಬಸವರಾಜು. ಭಾ.ಆ.ಸೇ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ. ಈ.ಈರಣ್ಣ. | ಸದಸ್ಯ ಕಾರ್ಯದರ್ಶಿ ವಾಡ್ ನಂ: 18 |
| 3. | ಶ್ರೀ. ನಾಗರಾಜ. | ಸಹಾಯಕ ಕಂದಾಯ ಅಧಿಕಾರಿ (ಹೆಬ್ಬಾಳ) |
| 4. | ಶ್ರೀ. ರವೀಂದ್ರ | ಡಿ.ಆರ್.ಎಫ್.ಓ |

ಪ್ರಾರಂಭಿಕವಾಗಿ ಸಭೆಯನ್ನು ಉದ್ದೇಶಿಸಿ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್‌ನಲ್ಲಿರುವ ನಿವಾಸಿಗಳ ಕ್ಷೇಮಾಬಿವೃದ್ಧಿ ಸಂಘದವರನ್ನು ಹಾಗೂ ಅಧಿಕಾರಿಗಳನ್ನು ಸ್ವಾಗತಿಸಿದರು.

ಸಭೆಯ ಅಧ್ಯಕ್ಷರು, ಅಧಿಕಾರಿ ನೌಕರುಗಳು ಮತ್ತು ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು ಸೇರಿ ಸ್ವ-ಪರಿಚಯ ಮಾಡಿಕೊಳ್ಳಲಾಯಿತು.

ವಾರ್ಡಿನ ಅಧ್ಯಕ್ಷರು ಮಾತನಾಡುತ್ತಾ ವಾರ್ಡಿನಲ್ಲಿ ಅಭಿವೃದ್ಧಿಯಾಗಬೇಕಾಗಿರುವ ಹಾಗೂ ಕುಂದು ಕೊರತೆಗಳ ಬಗ್ಗೆ ಚರ್ಚಿಸಲಾಯಿತು.

- Gail ಸಂಸ್ಥೆಯುವರಿಗೆ ಡಿಸೆಂಬರ್ ತಿಂಗಳೊಳಗೆ 100 ಸಂಪರ್ಕಗಳನ್ನು ಕಲ್ಪಿಸಿ ಫಲಾನುಭವಿಗಳ ಪಟ್ಟಿಯನ್ನು ಸಲ್ಲಿಸುವಂತೆ ಸೂಚಿಸಲಾಯಿತು.
- ಡ್ರೈವೇಸ್ಟ್ ಸೆಂಟರ್ ಬಳಿ ಇರುವ ಜಂಕ್ ಆಟೋಗಳನ್ನು 3 (ಮೂರು) ದಿನದೊಳಗಾಗಿ ತೆರವುಗೊಳಿಸಲು ಘನತ್ಯಾಜ್ಯ ನಿರ್ವಹಣೆಯ ಇಲಾಖೆಯ ಪರವಾಗಿ ಹಾಜರಿದ್ದ ಮೇಲ್ವಿಚಾರಕರಾದ ಸುರೇಶ್ ರವರಿಗೆ ಸೂಚಿಸಲಾಯಿತು.
- ಅಂಜನಮೂರ್ತಿ ಸರ್ಕಲ್‌ನಲ್ಲಿ ತಾತ್ಕಾಲಿಕ ಬೀದಿ ದೀಪವನ್ನು 3 (ಮೂರು) ದಿನದೊಳಗಾಗಿ ಅಳವಡಿಸಲು ಗುತ್ತಿಗೆದಾರರ ಪರವಾಗಿ ಹಾಜರಿದ್ದ ಸ್ವಾಮಿಯವರಿಗೆ ಸೂಚಿಸಲಾಯಿತು.
- ಪೋಲೀಸ್ ಗಸ್ತನ್ನು ಹೆಚ್ಚಿಸಲು ಸಂಜಯನಗರ ಪೋಲೀಸ್ ಠಾಣೆಯ ಹೊಯ್ಸಳ ಸಿಬ್ಬಂಧಿಗೆ ಸೂಚಿಸಲಾಯಿತು.
- ವಾರ್ಡ್‌ನಲ್ಲಿರುವ ಮರಗಳ ಕೊಂಬೆಗಳನ್ನು ತೆಗೆಯಲು ಸಭೆಯಲ್ಲಿ ಹಾಜರಿದ್ದ ಶ್ರೀ.ರವೀಂದ್ರ ಡಿ.ಆರ್.ಎಫ್.ಓ ರವರಿಗೆ ಸೂಚಿಸಲಾಯಿತು.

ಈ ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 18 ರಾದಾಕೃಷ್ಣ ದೇವಸ್ಥಾನ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 18 ರಾದಾಕೃಷ್ಣ ದೇವಸ್ಥಾನ

**<u>ಪ್ರತಿಯನ್ನು:-</u>**

1. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
3. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
4. ಕಛೇರಿ ಪ್ರತಿ.